ವಿದ್ಯಾಸಿರಿ ಯೋಜನೆ ಸಾಮಾನ್ಯರಿಗೆ ವಿಸ್ತರಿಸುವುದು

60(287); ರವಿಸುಬ್ರಹ್ಮಣ್ಯ ಎಲ್.ಎ. (ಬಸವನಗುಡಿ)

ಅ) ಪ್ರಸ್ತುತ ಜಾರಿಯಲ್ಲಿರುವ 'ವಿದ್ಯಾಸಿರಿ' ವಿದ್ಯಾರ್ಥಿ ವೇತನ ಯೋಜನೆ ಅಡಿಯಲ್ಲಿ ಈವರೆಗೆ ಸಲ್ಲಿಕೆಯಾಗಿರುವ (30.06.2015) ಆನ್‌ಲೈನ್ ಅರ್ಜಿಗಳ ಸಂಖ್ಯೆ ಎಷ್ಟು (ಜಿಲ್ಲಾವಾರು, ಸಮುದಾಯವಾರು ವಿವರ ನೀಡುವುದು);

ಆ) 'ವಿದ್ಯಾಸಿರಿ' ವೇತನ ನೀಡಲು ಡೆ ಸ್ಕೂಲರ್ಸ್ ಸರ್ಕಾರಿ ಹಾಸ್ಟೆಲ್ ಇಲ್ಲದವರಿಗೆ ನಿಗದಿಗೊಳಿಸಲಾಗಿರುವ ವೇತನ ಹಾಗೂ ಮಾನದಂಡವೇನು? (ಸರ್ಕಾರಿ ಆದೇಶದ ಪ್ರತಿ ಒದಗಿಸುವುದು)

ಇ) 'ವಿದ್ಯಾಸಿರಿ' ಯೋಜನೆಯನ್ನು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೂ ವಿಸ್ತರಿಸಿ ಒಂದು ವಾರದೊಳಗೆ ಆದೇಶ ಹೊರಡಿಸುವುದಾಗಿ ವಿಧಾನ ಸಭೆಯಲ್ಲಿ ದಿನಾಂಕ: 30.01.2014 ರಂದು ತಿಳಿಸಿದ್ದು, ಇಲ್ಲಿಯವರೆಗೂ ಆದೇಶ ಹೊರಡಿಸದೇ ಇರಲು ಕಾರಣಗಳೇನು; ಇದು ಸರ್ಕಾರದ ಗಮನಕ್ಕೆ ಬಂದಿದೆಯೆ?

ಈ) ಬಂದಿದ್ದಲ್ಲಿ, 'ವಿದ್ಯಾಸಿರಿ' ಯೋಜನೆಯನ್ನು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೆ ಯಾವಾಗಿನಿಂದ ಜಾರಿಗೆ ತರಲಾಗುವುದು;

ಉ) 'ವಿದ್ಯಾಸಿರಿ' ಯೋಜನೆಗೆ ಈ ವರೆಗೆ ಸರ್ಕಾರ ಎಷ್ಟು ಅನುದಾನವನ್ನು ಬಿಡುಗಡೆ ಮಾಡಿದೆ (ಈ ಯೋಜನೆಗೆ ಸಂಬಂಧಿಸಿದ ಸರ್ಕಾರಿ ಆದೇಶದ ಪ್ರತಿಯನ್ನು ಒದಗಿಸುವುದು)?

ಶ್ರೀ ಹೆಚ್. ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು)

ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಯನ್ನು 2013–14ನೇ ಸಾಲಿನಿಂದ ಜಾರಿಗೆ ತರಲಾಗಿದ್ದು, ಈ ಯೋಜನೆಯಡಿ 2013–14ನೇ

ಸಾಲಿನಲ್ಲಿ ಒಟ್ಟು 2,16,221 ಹಾಗೂ 2014–15ನೇ ಸಾಲಿನಲ್ಲಿ 4,80,640 ಅರ್ಜಿಗಳು ಸಲ್ಲಿಕೆಯಾಗಿರುತ್ತದೆ. 2015–16ನೇ ಸಾಲಿಗೆ ಅರ್ಜಿಯನ್ನು ಸ್ವೀಕರಿಸಬೇಕಿರುತ್ತದೆ.

ಪ್ರವರ್ಗವಾರು ಸಲ್ಲಿಕೆಯಾಗಿರುವ ಅರ್ಜಿಗಳ ವಿವರಗಳು ಈ ಕೆಳಕಂಡಂತಿರುತ್ತದೆ.

ಆರ್ಥಿಕ ವರ್ಷ	ಪ್ರ–1	ಪ್ರ–2ಎ	ಪ್ರ–3ಎ	ಪ್ರ–3ಬಿ	ಓಬಿಸಿ	ಇತರೆ ವರ್ಗ	ಒಟ್ಟು
2013–14	28169	76560	41131	70190	171	0	**216221**
2014–15	61119	181857	95350	162396	139	2026	**480640**

ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಗೆ ಆನ್‌ಲೈನ್‌ನಲ್ಲಿ ಸ್ವೀಕೃತವಾದ ಅರ್ಜಿಗಳ ಜಿಲ್ಲಾವಾರು ಹಾಗೂ ಪ್ರವರ್ಗವಾರು ವಿವರವನ್ನು ಅನುಬಂಧ–1 ಮತ್ತು ಅನುಬಂಧ–2ರಲ್ಲಿ ನೀಡಲಾಗಿದೆ.

ಆ) ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ ಮಾಸಿಕ ರೂ. 1500/–ರಂತೆ 10 ತಿಂಗಳ ಅವಧಿಗೆ ಒಟ್ಟು ರೂ. 15000/– ನೀಡಲಾಗುವುದು.

ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಗೆ ನಿಗದಿ ಪಡಿಸಿರುವ ಮಾನದಂಡಗಳು:

1) ಯಾವುದೇ ಇಲಾಖೆಯ ಸರ್ಕಾರಿ/ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯ/ವಸತಿ ಕಾಲೇಜುಗಳಲ್ಲಿ, ಪ್ರವೇಶ ದೊರೆಯದ ಹಾಗೂ ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡಲಾಗುವುದು.

2) ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ, ಪ್ರತಿ ತಿಂಗಳಿಗೆ ರೂ. 1500/–ರಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ. 15000/– ಸಹಾಯಧನವನ್ನು ಅವರ ಬ್ಯಾಂಕ್ ಖಾತೆಗೆ, ಜಮಾ ಮಾಡುವುದು.

3) ವಿದ್ಯಾರ್ಥಿಗಳು, 1) ವಿದ್ಯಾರ್ಥಿ ನಿಲಯಗಳ ಪ್ರವೇಶ, 2) ಊಟ ಮತ್ತು ವಸತಿ ಸಹಾಯ ಯೋಜನೆ (ವಿದ್ಯಾಸಿರಿ) ಮತ್ತು 3) ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ–ಇವುಗಳಲ್ಲಿ ಯಾವುದಾದರು ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರಿರುತ್ತಾರೆ.

4) ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಟ 5 ಕಿ.ಮೀ. ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ/ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ ಪಟ್ಟಣದಲ್ಲಿ ಇರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ. ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

5) ವಿದ್ಯಾರ್ಥಿಯ ತಂದೆ–ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.

   ಅ) ಪ್ರವರ್ಗ 1 ರ ವಿದ್ಯಾರ್ಥಿಗಳಿಗೆ ರೂ. 2.50 ಲಕ್ಷ

   ಆ) ಪ್ರವರ್ಗ–2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ. 1.00 ಲಕ್ಷ

6) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ ಅಂತಹವರು ಅರ್ಹರಿರುವುದಿಲ್ಲ.

7) ವಿದ್ಯಾರ್ಥಿಯು ಪ್ರತಿ ತಿಂಗಳು ಶೇ.75ರಷ್ಟು ಹಾಜರಾತಿ ಹೊಂದಿರಬೇಕು. (ಸದರಿ ಕಾರ್ಯಕ್ರಮದ ಅನುಷ್ಠಾನ ಕುರಿತು ಸರ್ಕಾರದ ಆದೇಶ ಹಾಗೂ ಮಾರ್ಗಸೂಚಿಯನ್ನು ಇದರೊಂದಿಗೆ ಲಗತ್ತಿಸಿದೆ)

ಇ)

1) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ನೆರವಾಗುವ ದೃಷ್ಟಿಯಿಂದ, ವಿದ್ಯಾರ್ಥಿನಿಲಯದಲ್ಲಿ ಪ್ರವೇಶ

ದೊರಕದ ವಿದ್ಯಾರ್ಥಿಗಳಿಗಾಗಿ ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಯನ್ನು ಜಾರಿಗೆ ತರಲಾಗಿದೆ.

2) ವಿದ್ಯಾಸಿರಿ ಯೋಜನೆಗೆ ಅರ್ಜಿ ಸಲ್ಲಿಸುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದ್ದು, ಅರ್ಹರಿರುವ ಎಲ್ಲಾ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೂ ಮಂಜೂರಾತಿ ನೀಡಲು ಒದಗಿಸಿರುವ ಅನುದಾನದಿಂದ ಸಾಧ್ಯವಾಗುತ್ತಿಲ್ಲ.

3) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗಾಗಿ ರೂ.11250.00 ಲಕ್ಷ ಅನುದಾನ ನಿಗದಿಪಡಿಸಿದ್ದು, ಇದರಲ್ಲಿ ನವೀಕರಣ ಹಾಗೂ 75,000 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಲು ಸಾಧ್ಯವಾಗುತ್ತದೆ.

4) ಆದ್ದರಿಂದ, ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೂ ವಿದ್ಯಾಸಿರಿ–ಊಟ ಮತ್ತು ವಸತಿ ಯೋಜನೆಯನ್ನು ವಿಸ್ತರಿಸುವುದಾದಲ್ಲಿ, ಹೆಚ್ಚುವರಿ ಅನುದಾನ ಹಾಗೂ ಸರ್ಕಾರದ ಮಾರ್ಗಸೂಚಿಗೆ ತಿದ್ದುಪಡಿ ತರಬೇಕಿದ್ದು, ಈ ವಿಷಯವು ಪರಿಶೀಲನೆಯಲ್ಲಿದೆ.

ಈ) ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಸಲ್ಲಿಸಲ್ಪಡುವ ಅರ್ಜಿ ಹಾಗೂ ಒದಗಿಸಿರುವ ಆಯವ್ಯಯವನ್ನು ಗಣನೆಗೆ ತೆಗೆದುಕೊಂಡು ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೂ ಈ ಯೋಜನೆಯನ್ನು ವಿಸ್ತರಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ.

ಉ) ವಿದ್ಯಾಸಿರಿ–ಊಟ ಮತ್ತು ವಸತಿ ಸಹಾಯ ಯೋಜನೆಗೆ ಈವರೆಗೆ 2013–14ನೇ ಸಾಲಿನಲ್ಲಿ ರೂ. 34.20 ಕೋಟಿ ಹಾಗೂ 2014–15ನೇ ಸಾಲಿನಲ್ಲಿ ರೂ. 76.85 ಕೋಟಿ ಅನುದಾನವನ್ನು ಬಿಡುಗಡೆ ಮಾಡಿದ್ದು, 2015–16ನೇ ಸಾಲಿನಲ್ಲಿ ರೂ. 112.50 ಕೋಟಿ ನಿಗದಿಪಡಿಸಲಾಗಿದೆ. (ಈ ಯೋಜನೆಗೆ ಸಂಬಂಧಿಸಿದ ಸರ್ಕಾರಿ ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ)

ವಿಧಾನ ಸಭೆ ಸದಸ್ಯರಾದ ಶ್ರೀ. ರವಿ ಸುಬ್ರಹ್ಮಣ್ಯ ಎಲ್ ಎ (ಬಸವನಗುಡಿ) ಇವರ ಚುಕ್ಕೆ ಗುರುತಿನ
ಪ್ರಶ್ನೆ ಸಂ.287ಕ್ಕೆ ಉತ್ತರ
ಅನುಬಂಧ-I

2013-14ನೇ ಸಾಲಿನಲ್ಲಿ ವಿದ್ಯಾನಿಧಿ -ಊಟ ಮತ್ತು ವಸತಿ ಸಹಾಯ ಯೋಜನೆಯಡಿ ಜಿಲ್ಲಾವಾರು ಹಾಗೂ ಪ್ರವರ್ಗವಾರು
ಸ್ವೀಕರಿಸಿದ ಅರ್ಜಿಗಳ ವಿವರ

ಕ್ರ ಸಂ	ಜಿಲ್ಲೆಯ ಹೆಸರು	ಪ್ರವರ್ಗ-I	ಪ್ರವರ್ಗ-2ಎ	ಪ್ರವರ್ಗ-3ಎ	ಪ್ರವರ್ಗ-3ಬಿ	ಇತರೆ ಹಿಂದುಳಿದ ವರ್ಗ	ಇತರೆ ವರ್ಗ	ಒಟ್ಟು
1	ಬಾಗಲಕೋಟೆ	750	4490	774	2819	5	0	8838
2	ಬೆಂಗಳೂರು ಗ್ರಾಮಾಂತರ	195	653	887	237	1	0	1973
3	ಬೆಂಗಳೂರು ನಗರ	1118	4404	4933	3115	31	0	13601
4	ಬೆಳಗಾಂ	2519	6069	553	10270	3	0	19414
5	ಬಳ್ಳಾರಿ	1215	3182	843	3158	6	0	8404
6	ಬೀದರ್	434	1106	358	3711	1	0	5610
7	ಚಾಮರಾಜನಗರ	1263	4363	582	2852	0	0	9060
8	ಚಿಕ್ಕಬಳ್ಳಾಪುರ	567	676	189	1500	0	0	2932
9	ಚಿಕ್ಕಮಗಳೂರು	640	2169	2839	306	2	0	5956
10	ಚಿತ್ರದುರ್ಗ	616	1778	920	1391	3	0	4708
11	ದಕ್ಷಿಣಕನ್ನಡ	1599	1119	446	1401	0	0	4565
12	ದಾವಣಗೆರೆ	556	3908	1826	1406	8	0	7704
13	ಧಾರವಾಡ	1520	3014	516	5175	31	0	10256
14	ಗದಗ	728	3533	445	4635	8	0	9349
15	ಗುಲ್ಬರ್ಗಾ	449	3391	484	2628	1	0	6953
16	ಹಾಸನ	1863	3325	501	4112	9	0	9810
17	ಹಾವೇರಿ	692	2904	4924	2519	3	0	11042
18	ಕೊಡಗು	850	1745	174	3957	0	0	6726
19	ಕೋಲಾರ	118	721	915	274	0	0	2028
20	ಕೊಪ್ಪಳ	152	580	706	82	1	0	1521
21	ಮಂಡ್ಯ	529	1565	351	1219	3	0	3667
22	ಮೈಸೂರು	642	1653	6440	931	1	0	9667
23	ರಾಯಚೂರು	928	3672	3184	3630	2	0	11416
24	ರಾಮನಗರ	767	1950	397	1421	1	0	4536
25	ಶಿವಮೊಗ್ಗ	209	528	1773	290	1	0	2801
26	ತುಮಕೂರು	1242	4471	1414	2583	25	0	9735
27	ಉಡುಪಿ	1687	2897	3399	2156	8	0	10147
28	ಉತ್ತರ ಕನ್ನಡ	807	1799	107	551	15	0	3279
29	ವಿಜಯಪುರ	2621	3816	55	1241	2	0	7735
30	ಯಾದಗಿರಿ	893	1079	196	620	0	0	2788
	ಒಟ್ಟು	28169	76560	41131	70190	171	0	216221

ವಿಧಾನ ಸಭೆ ಸದಸ್ಯರಾದ ಶ್ರೀ. ರವಿ ಸುಬ್ರಹ್ಮಣ್ಯ ಎಲ್ ಎ (ಬಸವನಗುಡಿ) ಇವರ ಚುಕ್ಕೆ ಗುರುತಿನ
ಪ್ರಶ್ನೆ ಸಂ.287ಕ್ಕೆ ಉತ್ತರ

ಅನುಬಂಧ-2

2014-15ನೇ ಸಾಲಿನಲ್ಲಿ ವಿದ್ಯಾಸಿರಿ -ಉಚಿತ ಮತ್ತು ವಸತಿ ಸಹಾಯ ಯೋಜನೆಯಡಿ ಜಿಲ್ಲಾವಾರು ಹಾಗೂ ಪ್ರವರ್ಗವಾರು
ನೋಂದಾಯಿಸಿದ ಅರ್ಜಿಗಳ ಪ್ರವರ್ಗವಾರು ವಿವರ.

ಕ್ರ ಸಂ	ಜಿಲ್ಲೆಯ ಹೆಸರು	ಪ್ರವರ್ಗ-1	ಪ್ರವರ್ಗ-2ಬಿ	ಪ್ರವರ್ಗ-3ಎ	ಪ್ರವರ್ಗ-3ಬಿ	ಇತರೆ ಹಿಂದುಳಿದ ವರ್ಗ	ಇತರೆ ವರ್ಗ	ಒಟ್ಟು
1	ಬಾಗಲಕೋಟೆ	1549	10375	1700	5950	2	81	19658
2	ಬೆಂಗಳೂರು ಗ್ರಾಮಾಂತರ	600	2413	2287	716	1	17	5768
3	ಬೆಂಗಳೂರು ನಗರ	3719	14413	14846	8708	52	220	40037
4	ಬೆಳಗಾಂ	4571	12700	1034	22712	4	27	39172
5	ಬಳ್ಳಾರಿ	2177	6751	2010	6285	3	154	16582
6	ಬೀದರ್	805	2490	803	8724	1	43	12256
7	ಚಾಮರಾ	2819	10407	1386	7740	2	56	21388
8	ಚಾಮರಾಜನಗರ	1156	1560	362	2612	0	16	5431
9	ಚಿಕ್ಕಬಳ್ಳಾಪುರ	1061	3649	4569	564	1	29	9421
10	ಚಿಕ್ಕಮಗಳೂರು	1022	3595	2013	2578	2	6	8796
11	ಚಿತ್ರದುರ್ಗ	4068	3345	1347	4237	2	22	12401
12	ದಕ್ಷಿಣಕನ್ನಡ	1628	9736	4501	3521	7	115	18601
13	ದಾವಣಗೆರೆ	2588	5908	1107	10415	17	108	19226
14	ಧಾರವಾಡ	1851	8707	1338	12193	2	39	23023
15	ಗದಗ	891	7523	1098	6186	0	16	14996
16	ಗುಲ್ಬರ್ಗಾ	3709	7352	1104	10591	7	151	21869
17	ಹಾಸನ	1166	5228	9409	4019	0	61	18985
18	ಹಾವೇರಿ	1531	4057	467	9082	1	35	14467
19	ಕೊಡಗು	193	1318	1806	508	0	10	3653
20	ಕೋಲಾರ	469	2160	2621	305	0	18	5335
21	ಕೊಪ್ಪಳ	943	3354	554	2229	3	21	6777
22	ಮಂಡ್ಯ	1171	3578	12395	2042	0	57	18360
23	ಮೈಸೂರು	1991	9108	8395	7767	0	202	26195
24	ರಾಯಚೂರು	1667	4323	866	3108	0	36	9517
25	ರಾಮನಗರ	516	1641	5039	886	0	5	7690
26	ಶಿವಮೊಗ್ಗ	2145	8745	2733	5622	17	152	18505
27	ತುಮಕೂರು	4099	7203	8453	6313	2	157	24993
28	ಉಡುಪಿ	2708	7746	380	2297	11	106	12641
29	ಉತ್ತರ ಕನ್ನಡ	6078	9458	178	2732	2	56	17639
30	ಯಾದಗಿರಿ	2308	3014	549	1754	0	10	7258
	ಒಟ್ಟು	61199	181857	95350	162396	139	2026	480640

ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯದ "ಹೆಚ್ಚುವರಿ ಭೋಜನಾ ವೆಚ್ಚ" ಕಾರ್ಯಕ್ರಮಕ್ಕೆ ಬದಲಾಗಿ "ಊಟ ಮತ್ತು ವಸತಿ ಸಹಾಯ ಯೋಜನೆ" ಕಾರ್ಯಕ್ರಮ ಮಂಜೂರಾತಿ ಹಾಗೂ ಅನುಷ್ಠಾನದ ಬಗ್ಗೆ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಓದಲಾಗಿದೆ:–

1. ಸರ್ಕಾರಿ ಆದೇಶ ಸಂಖ್ಯೆ:ಎಸ್‌ಡಬ್ಲ್ಯುಎಲ್ 115 ಬಿಎಂಎಸ್ 79, ದಿ.25.12.79
2. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯುಎಲ್ 22 ಬಿಪಿಎಸ್, ದಿ.10.10.1990
3. ಸರ್ಕಾರಿ ಆದೇಶ ಸಂಖ್ಯೆ: ಸಕಕಾ 22 ಬಿಪಿಎಸ್ 89, ದಿ.31.01.1990
4. ಸರ್ಕಾರಿ ಆದೇಶ ಸಂಖ್ಯೆ: ಎಸ್‌ಡಬ್ಲ್ಯುಎಲ್ 53 ಬಿಪಿಎಸ್ 91, ದಿ.30.08.1991 ಮತ್ತು 06.01.1992
5. ಸರ್ಕಾರಿ ಆದೇಶ ಸಂಖ್ಯೆ: ಸಕಇ 100 ಬಿಎಂಎಸ್ 2002, ದಿ.06.07.2002
6. ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಪರಿಷ್ಕೃತ ಆದೇಶ ಸಂಖ್ಯೆ 1104/21/2006–ಬಿಸಿ–1, ದಿನಾಂಕ 11.08.2011
7. ದಿನಾಂಕ:12.07.2013ರಂದು ಮಂಡಿಸಿದ 2013–14ನೇ ಸಾಲಿನ ಪರಿಷ್ಕೃತ ಆಯವ್ಯಯ ಭಾಷಣದಲ್ಲಿನ ಘೋಷಣೆ ಕಂಡಿಕೆ ಸಂಖ್ಯೆ:271

8. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಏಕ ಕಡತ ಪ್ರಸ್ತಾವನೆ ಸಂಖ್ಯೆ: ಹಿಂವಕ/ಪಿಎಂಎಸ್–ಡಿಬಿಟಿ/ಸಿಆರ್–10/2013–14, ದಿನಾಂಕ 15.08.2013

ಪ್ರಸ್ತಾವನೆ:–

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಿಂದ (5)ರಲ್ಲಿನ ಆದೇಶಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ "ಹೆಚ್ಚುವರಿ ಭೋಜನಾ ವೆಚ್ಚ" ಮಂಜೂರು ಮಾಡಲು ಆದೇಶ/ಮಾರ್ಗಸೂಚಿಗಳನ್ನು ನೀಡಲಾಗಿತ್ತು. ಸದರಿ ಸರ್ಕಾರದ ಆದೇಶಗಳಂತೆ ಮಂಜೂರು ಮಾಡಲಾಗುತ್ತಿದ್ದ ದರಗಳು ಬಹಳ ಕಡಿಮೆ ಇದ್ದು, ಮಂಜೂರಾತಿ ಷರತ್ತುಗಳೂ ಸಹ ಈಗಿನ ಸನ್ನಿವೇಶದಲ್ಲಿ ಪ್ರಸ್ತುತ ಇಲ್ಲದಿರುವ ಕಾರಣ, ಈ ಆದೇಶಗಳನ್ನು ನಿರಸನಗೊಳಿಸಿ, ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿನ ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಲ್ಲಿ, ನಿಗದಿಪಡಿಸಿರುವ ಷರತ್ತುಗಳನ್ನು ಅಳವಡಿಸಿಕೊಂಡು, ಹೊಸದಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ 2013–14ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ "ಊಟ ಮತ್ತು ವಸತಿ ಸಹಾಯ ಯೋಜನೆ", ಕಾರ್ಯಕ್ರಮವನ್ನು ಜಾರಿಗೊಳಿಸಲು ಮಂಜೂರಾತಿ ನೀಡಬೇಕೆಂದು ಕೋರಿ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(8)ರ ಏಕ ಕಡತದ ಮುಖೇನ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡಿದರೂ ಸಹ, ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವಷ್ಟು ಸ್ಥಳಾವಕಾಶ, ಶೌಚಾಲಯಗಳು ಹಾಗೂ ಸ್ನಾನ ಗೃಹಗಳು ಇರುವ ಖಾಸಗಿ ಕಟ್ಟಡಗಳು ಲಭ್ಯವಾಗುತ್ತಿಲ್ಲ. ಸಾರ್ವಜನಿಕರು ಖಾಸಗಿ ಕಟ್ಟಡವನ್ನು ವಿದ್ಯಾರ್ಥಿನಿಲಯಗಳಿಗಾಗಿ ಬಾಡಿಗೆಗೆ ನೀಡಲು ಮುಂದೆ ಬರುತ್ತಿಲ್ಲ ಹಾಗೂ ಕೆಲವು ಕಡೆ ಬಾಡಿಗೆಗೆ ಕಟ್ಟಡಗಳು ಲಭ್ಯವಾದರೂ ಸಹ, ಅವುಗಳಲ್ಲಿನ ಕೊಠಡಿಗಳ ಅಳತೆ ತೀರಾ ಕಡಿಮೆ ಇರುವುದರಿಂದ ಒಂದು ಚಿಕ್ಕ ಕೊಠಡಿಯಲ್ಲಿ 5 ರಿಂದ 8 ಮಂದಿ ವಿದ್ಯಾರ್ಥಿಗಳಿಗೆ ಅವಕಾಶ ನೀಡಿದ್ದು, ತೀರಾ ಇಕ್ಕಟ್ಟಿನ ಪರಿಸ್ಥಿತಿಯಲ್ಲಿ ಇವರು

ವಾಸವಿರುವ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ಅವರ ವಿದ್ಯಾಭ್ಯಾಸಕ್ಕೆ ಹಾಗೂ ಅವರ ಒಟ್ಟಾರೆ ಆರೋಗ್ಯಕ್ಕೆ ತೊಂದರೆಯಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಹಾಗೂ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಪ್ರವೇಶಕ್ಕಾಗಿ ಅತೀ ಹೆಚ್ಚಿನ ಬೇಡಿಕೆ ಇರುವುದರಿಂದ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ಹಾಗೂ ಮೆರಿಟ್ ಹೊಂದಿರುವ ವಿದ್ಯಾರ್ಥಿಗಳಿಗೆ, ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳಿಗೆ 1,500/– ರೂ.ನಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು 15,000 ರೂ.ಗಳನ್ನು ಅವರ ಬ್ಯಾಂಕ್ ಖಾತೆಗಳಿಗೆ ಆನ್‌ಲೈನ್ ಮುಖಾಂತರ ಜಮಾ ಮಾಡುವ "ಊಟ ಮತ್ತು ವಸತಿ ಸಹಾಯ ಯೋಜನೆ" ಯನ್ನು ಜಾರಿಗೆ ತರಲು ಸರ್ಕಾರ ನಿರ್ಣಯಿಸಿದೆ. ಅದರಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 516 ಬಿಎಂಎಸ್ 2013, ಬೆಂಗಳೂರು

ದಿನಾಂಕ: 24.09.2013

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಮೇಲೆ ಓದಲಾದ ಕ್ರಮ ಸಂಖ್ಯೆ(1) ರಿಂದ (5)ರವರೆಗಿನ ಸರ್ಕಾರದ ಆದೇಶಗಳನ್ನು ನಿರಸನಗೊಳಿಸಿ (supersession), ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗಾಗಿ ಅನುಷ್ಠಾನಗೊಳಿಸುತ್ತಿರುವ ರಾಜ್ಯದ ಹೆಚ್ಚುವರಿ ಭೋಜನಾ ವೆಚ್ಚ ಕಾರ್ಯಕ್ರಮಕ್ಕೆ ಬದಲಾಗಿ, ಭಾರತ ಸರ್ಕಾರದ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮದಲ್ಲಿ ನಿಗಧಿಪಡಿಸಿರುವ ಷರತ್ತುಗಳನ್ನು ಅಳವಡಿಸಿಕೊಂಡು, ಹೊಸದಾಗಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ, ಈ ಆದೇಶದ ಅನುಬಂಧದಲ್ಲಿರುವ ಮಾರ್ಗಸೂಚಿಗಳ ಪ್ರಕಾರ "ಊಟ ಮತ್ತು ವಸತಿ ಸಹಾಯ ಯೋಜನೆ", ಕಾರ್ಯಕ್ರಮವನ್ನು ಜಾರಿಗೊಳಿಸಲು ಆದೇಶಿಸಿದೆ.

ಈ ಯೋಜನೆಯಡಿ ಸೌಲಭ್ಯವನ್ನು, ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನದ ಮಿತಿಗೆ ಒಳಪಟ್ಟು ಮಂಜೂರು ಮಾಡತಕ್ಕದ್ದು ಈ ಯೋಜನೆಗೆ ತಗಲುವ ವೆಚ್ಚವನ್ನು ರಾಜ್ಯವಲಯ ಯೋಜನೆ ಲೆಕ್ಕಶೀರ್ಷಿಕೆ 2225–03–800–0–31ರಡಿ ಒದಗಿಸುವ ಅನುದಾನದಿಂದ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ:ಪಿಡಿ 44 ಐಎಂಎಂ2013, ದಿ 28.08.2013ರಲ್ಲಿ ನೀಡಿರುವ ಮತ್ತು ಆರ್ಥಿಕ ಇಲಾಖೆಯು ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 604 ವೆಚ್ಚ–3/13. ದಿ 31.08.2013ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

(ಬಿ.ಹೆಚ್. ಅನಿಲ್ ಕುಮಾರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಇವರಿಗೆ:–

ಕರ್ನಾಟಕ ರಾಜ್ಯಪತ್ರದ ಸಂಕಲನಕಾರರು, ಬೆಂಗಳೂರು ಇವರಿಗೆ ಕರ್ನಾಟಕ ರಾಜ್ಯಪತ್ರದ ಮುಂದಿನ ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಿ 10000 ಪ್ರತಿಗಳನ್ನು ನೇರವಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಕಳುಹಿಸಿಕೊಡತಕ್ಕದ್ದು.

ಗೆ,

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು
4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು

5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ವೌಢಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
7. ಸರ್ಕಾರದ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ, ವಿಕಾಸ ಸೌಧ, ಬೆಂಗಳೂರು
8. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
9. ರಾಜ್ಯ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ
10. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
11. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ
12. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
13. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
14. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ. ವಿಕಾಸ ಸೌಧ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ–3), ವಿಧಾನಸೌಧ, ಬೆಂಗಳೂರು.
17. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ ಹಿಂವಕ 516 ಬಿಎಂಎಸ್ 2013, ದಿನಾಂಕ 24.09.2013 ಕ್ಕೆ ಅನುಬಂಧ

ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ "ಊಟ ಮತ್ತು ವಸತಿ ಸಹಾಯ ಯೋಜನೆ" ಕಾರ್ಯಕ್ರಮ ಅನುಷ್ಠಾನದ ಮಾರ್ಗಸೂಚಿಗಳು.

(ಸಮಾಜ ಕಲ್ಯಾಣ /ಪರಿಶಿಷ್ಟ ವರ್ಗಗಳ ಕಲ್ಯಾಣ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳ ವ್ಯಾಪ್ತಿಗೆ ಬರುವ ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಸೌಲಭ್ಯಗಳನ್ನು ಪಡೆಯಲು ಅರ್ಹರಿರುವುದಿಲ್ಲ.)

I. ಯೋಜನೆಯ ಉದ್ದೇಶ:

(ಅ) ಯಾವುದೇ ಇಲಾಖೆಯ ಸರ್ಕಾರಿ / ಸರ್ಕಾರಿ ಅನುದಾನಿತ ವಿದ್ಯಾರ್ಥಿನಿಲಯ / ವಸತಿ ಕಾಲೇಜುಗಳಲ್ಲಿ, ಪ್ರವೇಶ ದೊರೆಯದ ಹಾಗೂ ಮೆಟ್ರಿಕ್–ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ, ಊಟ ಮತ್ತು ವಸತಿ ಸಹಾಯವನ್ನು ಒದಗಿಸುವುದು, ಈ ಯೋಜನೆಯ ಉದ್ದೇಶ.

(ಆ) ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ, ಪ್ರತಿ ತಿಂಗಳಿಗೆ ರೂ.1500/–ರಂತೆ, ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ.1500/– ಸಹಾಯಧನವನ್ನು, ಇತರೆ ನಿಬಂಧನೆಗಳಿಗೊಳಪಟ್ಟು, ಅವರು ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ ತೆರೆದಿರುವ ಬ್ಯಾಂಕ್ ಖಾತೆಗೆ, ಆನ್‌ಲೈನ್ ಮೂಲಕ ಜಮಾ ಮಾಡುವುದು.

(ಇ) ವಿದ್ಯಾರ್ಥಿಗಳು (i) ವಿದ್ಯಾರ್ಥಿ ನಿಲಯದಲ್ಲಿ ಪ್ರವೇಶ, (ii) ಊಟ ಮತ್ತು ವಸತಿ ಸಹಾಯ ಯೋಜನೆ ಮತ್ತು (iii) ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ವೇತನ – ಇವುಗಳಲ್ಲಿ ಯಾವುದಾದರೂ ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರಿರುತ್ತಾರೆ.

(ಈ) ಈ ಯೋಜನೆಯಡಿ ಸೌಲಭ್ಯ ಪಡೆಯಲು ಅರ್ಹರಾದವರು, ಆನ್‌ಲೈನ್ (Online) ಮೂಲಕ ಅರ್ಜಿ ಸಲ್ಲಿಸಬೇಕು.

II. ಅರ್ಹತೆ:

1. (ಅ) ಭಾರತದ ಪ್ರಜೆಯಾಗಿದ್ದು, ಕರ್ನಾಟಕ ಖಾಯಂ ನಿವಾಸಿ ಆಗಿರಬೇಕು.

(ಆ) ಭಾರತ ಸರ್ಕಾರ ಅಥವಾ ರಾಜ್ಯ ಸರ್ಕಾರ ಅಧಿಸೂಚಿಸಿರುವ, ಇತರೆ ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ಸೇರಿರಬೇಕು.

(ಇ) ಕರ್ನಾಟಕದ ಶಾಸನಬದ್ದ ವಿಶ್ವವಿದ್ಯಾಲಯಗಳ ಅಧೀನಕ್ಕೆ ಒಳಪಡುವ, ಸರ್ಕಾರಿ / ಸ್ಥಳೀಯ ಸಂಸ್ಥೆ/ ಅನುದಾನಿತ ಸಂಸ್ಥೆಗಳು / ಮಾನ್ಯತೆ ಪಡೆದ ಅನುದಾನ ರಹಿತ ಖಾಸಗಿ ಸಂಸ್ಥೆಗಳಲ್ಲಿ – ಮೆಟ್ರಿಕ್ ನಂತರದ ಕೋರ್ಸುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಾಗಿರಬೇಕು.

2.(ಅ) ಈ ಮೇಲಿನ ಸೌಲಭ್ಯ ಪಡೆಯಲು ವಿದ್ಯಾರ್ಥಿಯ, ತಂದೆ–ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ (Gross Annual Income) ಈ ಕೆಳಗೆ ನಿಗದಿಪಡಿಸಿದ ಮಿತಿಯೊಳಗೆ ಇರಬೇಕು.

(i) ಪ್ರವರ್ಗ–1 ರ ವಿದ್ಯಾರ್ಥಿಗಳಿಗೆ ರೂ.2.50 ಲಕ್ಷ

(ii) ಪ್ರವರ್ಗ–2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ

(ಆ) ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಟ 5 ಕಿ.ಮೀ. ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ, ನಗರ/ಪಟ್ಟಣ ಆಗಿದ್ದು, ಬೇರೆ ನಗರ/ಪಟ್ಟಣದಲ್ಲಿ ಇರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

(ಇ) ಈ ಯೋಜನೆಯಡಿ ಪ್ರಥಮ ಬಾರಿಗೆ ಸೌಲಭ್ಯವನ್ನು ಪಡೆಯಲು, ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ–1 – 40%

ಪ್ರವರ್ಗ–2ಎ, 3ಎ, 3ಬಿ – 50%

(ಈ) ನವೀಕರಣ ವಿದ್ಯಾರ್ಥಿಗಳು ಈ ಯೋಜನೆ ಸೌಲಭ್ಯಕ್ಕೆ ಅರ್ಹರಾಗಲು, ಅವರು ಈ ಹಿಂದಿನ ವರ್ಷದ ವಾರ್ಷಿಕ ಪರೀಕ್ಷೆಯಲ್ಲಿ, ಈ ಕೆಳಗಿನಂತೆ ಕನಿಷ್ಠ ಅಂಕಗಳನ್ನು ಪಡೆದು ಉತ್ತೀರ್ಣರಾಗಿರಬೇಕು.

ಪ್ರವರ್ಗ–1 – 50%

ಪ್ರವರ್ಗ–2ಎ, 3ಎ, 3ಬಿ – 60%

(ಒಂದು ವೇಳೆ, ವೈದ್ಯಕೀಯ ಕಾರಣಗಳಿಂದಾಗಿ ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದಿದ್ದಲ್ಲಿ, ಅಂತಹವರು, ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರ ಪಡೆದು ನಲ್ಲಿಸಬೇಕು.)

3. (ಅ) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ. (ಉದಾ: ಬಿ.ಎ ನಂತರ ಬಿ.ಕಾಂ, ಎಂ.ಎ (ಕನ್ನಡ) ನಂತರ ಎಂ.ಎ (ಇಂಗ್ಲೀಷ್), ಬಿ.ಎಡ್ ನಂತರ ಎಲ್.ಎಲ್.ಬಿ, ಇತ್ಯಾದಿಗಳಿಗೆ ಪ್ರವೇಶ ಪಡೆದಿದ್ದಲ್ಲಿ)

(ಆ) ಸ್ನಾತಕೋತ್ತರ ವೈದ್ಯಕೀಯ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ ವಿದ್ಯಾರ್ಥಿಗಳು, ಕೋರ್ಸಿನ ಅವಧಿಯಲ್ಲಿ ಮೆಡಿಕಲ್ ಪ್ರಾಕ್ಟೀಸ್ ಮಾಡುತ್ತಿದ್ದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.

(ಇ) ಕಲೆ, ವಿಜ್ಞಾನ, ಹಾಗೂ ವಾಣಿಜ್ಯ ಕೋರ್ಸುಗಳ, ಪದವಿ ಅಥವಾ ಸ್ನಾತಕೋತ್ತರ ಪದವಿಗಳಲ್ಲಿ ಉತ್ತೀರ್ಣ / ಅನುತ್ತೀರ್ಣರಾದವರು ಅಂಗೀಕೃತ ವೃತ್ತಿಪರ ಅಥವಾ ತಾಂತ್ರಿಕ ಸರ್ಟಿಫಿಕೇಟ್, ಡಿಪ್ಲೋಮ, ಪದವಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡಿದ್ದಲ್ಲಿ, ಹಾಗೂ ಇತರೆ ರೀತಿ ಅರ್ಹರಿದ್ದಲ್ಲಿ ಅವರು ಈ ಯೋಜನೆಯ ಅಡಿ ಸೌಲಭ್ಯಗಳಿಗೆ ಅರ್ಹರಿರುತ್ತಾರೆ. ಒಂದಕ್ಕಿಂತ ಹೆಚ್ಚು ಬಾರಿ ಕೋರ್ಸುಗಳ ಬದಲಾವಣೆ ಮಾಡಿಕೊಂಡವರು ಅರ್ಹರಿರುವುದಿಲ್ಲ.

(ಈ) ಒಂದೇ ಕುಟುಂಬದ ಇಬ್ಬರು ಗಂಡು ಮಕ್ಕಳು ಮಾತ್ರ ಈ ಯೋಜನೆಗೆ ಅರ್ಹರು. ಆದರೆ, ಈ ನಿರ್ಬಂಧ ಹೆಣ್ಣು ಮಕ್ಕಳಿಗೆ ಅನ್ವಯಿಸುವುದಿಲ್ಲ.

4. 2014–15ನೇ ಸಾಲಿನಿಂದ, ಈ ಸೌಲಭ್ಯವನ್ನು ಪಡೆಯಲು ಇಚ್ಛಿಸುವ ವಿದ್ಯಾರ್ಥಿಗಳು, ಕಡ್ಡಾಯವಾಗಿ ಅವರ ಹೆಸರಿನಲ್ಲಿ ಆಧಾರ್ ಸಂಖ್ಯೆಯನ್ನು ಹೊಂದಿರತಕ್ಕದ್ದು.

iii. ಅರ್ಜಿ ಸಲ್ಲಿಸುವ ವಿಧಾನ:

(ಅ) ಈ ಯೋಜನೆಯಡಿ ಸಹಾಯಧನ ಪಡೆಯಲು ಇಚ್ಛಿಸುವ ಹಾಗೂ ಅರ್ಹತೆಯುಳ್ಳ ವಿದ್ಯಾರ್ಥಿಗಳು, ನಿಗದಿತ ಅರ್ಜಿ ನಮೂನೆಯಲ್ಲಿ, ಆನ್‌ಲೈನ್ ಮೂಲಕ ಎಲ್ಲಾ ವಿವರಗಳನ್ನು ನಮೂದಿಸಿ, ಅರ್ಜಿ ಸಲ್ಲಿಸಬೇಕು.

(ಆ) ಅರ್ಜಿಯೊಂದಿಗೆ ಲಗತ್ತಿಸಬೇಕಾದ ಎಲ್ಲಾ ಮೂಲ ದಾಖಲೆಗಳನ್ನು ಸ್ಕ್ಯಾನ್ (Scan) ಮಾಡಿ, ಅಪ್‌ಲೋಡ್ (Upload) ಮಾಡಬೇಕು.

(ಇ) ಯಾವುದಾದರೂ ಕೋರ್ ಬ್ಯಾಂಕಿಂಗ್ ವ್ಯವಸ್ಥೆ ಇರುವ ಬ್ಯಾಂಕಿನಲ್ಲಿ, ವಿದ್ಯಾರ್ಥಿಯ ಹೆಸರಿನಲ್ಲಿ (ಎಸ್.ಎಸ್.ಎಲ್.ಸಿ ಅಂಕಪಟ್ಟಿಯಲ್ಲಿ ದಾಖಲಾಗಿರುವ ರೀತಿಯಲ್ಲಿ), ಉಳಿತಾಯ ಖಾತೆಯನ್ನು ತೆರೆದು, ವಿವರಗಳನ್ನು ಅರ್ಜಿಯಲ್ಲಿ ನಮೂದಿಸಬೇಕು.

IV. ಅನುದಾನ ಹಂಚಿಕೆ ವಿಧಾನ:

(ಅ) ಆಯಾ ಶೈಕ್ಷಣಿಕ ವರ್ಷದಲ್ಲಿ ಲಭ್ಯವಾಗುವ ಅನುದಾನವನ್ನು ಪ್ರವರ್ಗವಾರು ಈ ಕೆಳಗಿನ ಮೀಸಲಾತಿಯಂತೆ ಮರು ಹಂಚಿಕೆ ಮಾಡಬೇಕು.

ಪ್ರವರ್ಗವಾರು ಹಂಚಿಕೆ ಮಾಡಬೇಕಾಗಿರುವ ಮೊತ್ತದ ಶೇಕಡಾವಾರು

ಪ್ರವರ್ಗ–1	–	15 %
ಪ್ರವರ್ಗ–2ಎ	–	53 %
ಪ್ರವರ್ಗ–3ಎ	–	14 %
ಪ್ರವರ್ಗ–3ಬಿ	–	18 %
ಒಟ್ಟು	–	**100 %**

(ಆ) ಆ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೆ ಒಳಪಟ್ಟು, ಅರ್ಹತೆ ಮತ್ತು ಆದಾಯಕ್ಕೆ (Meri cum Means) ಅನುಗುಣವಾಗಿ ಮಂಜೂರು ಮಾಡಬೇಕು.

V. ಕಾಲೇಜು ಪ್ರಾಂಶುಪಾಲರು ಮತ್ತು ಇಲಾಖೆಯ "ಪರಿಶೀಲನಾ ಅಧಿಕಾರಿ" ಕೈಗೊಳ್ಳಬೇಕಾದ ಕ್ರಮಗಳು:

(ಅ) ಆ ಕಾಲೇಜಿನ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಸಲ್ಲಿಸುವ ಅರ್ಜಿಗಳ ಸ್ವೀಕೃತಿ ಪತ್ರ ಮತ್ತು ಅಪ್‌ಲೋಡ್ ಮಾಡಿರುವ ಎಲ್ಲಾ ದಾಖಲೆಗಳ, ಧೃಢೀಕೃತ ಪ್ರತಿಗಳನ್ನು ವಿದ್ಯಾರ್ಥಿಗಳಿಂದ ಪಡೆದುಕೊಳ್ಳಬೇಕು. ಸದರಿ ಮಾಹಿತಿಯನ್ನು ಅವರು ಸಲ್ಲಿಸಿರುವ ದಾಖಲೆಗಳನ್ನು, ಕಾಲೇಜಿನಲ್ಲಿ ಲಭ್ಯವಿರುವ ಮಾಹಿತಿಗಳೊಂದಿಗೆ ಪರಿಶೀಲಿಸಿ ಆನ್‌ಲೈನ್‌ನಲ್ಲಿ ಧೃಢೀಕರಿಸಬೇಕು. ಈ ರೀತಿ ಧೃಢೀಕರಿಸಲ್ಪಟ್ಟ ಪಟ್ಟಿಯ ಹಾರ್ಡ್‌ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು, ಪ್ರತಿ ವಿದ್ಯಾರ್ಥಿವಾರು ಅಗತ್ಯ ದಾಖಲಾತಿಗಳನ್ನು, ಅನುಕ್ರಮವಾಗಿ ಜೋಡಿಸಿ ಸಿದ್ದಪಡಿಸಿಟ್ಟುಕೊಳ್ಳಬೇಕು.

(ಆ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ, ಅಧಿಕೃತ **"ಪರಿಶೀಲನಾ ಅಧಿಕಾರಿ"** ಕಾಲೇಜಿನ ಪ್ರಾಂಶುಪಾಲರು ಈ ಮೇಲಿನಂತೆ ಸಿದ್ದಪಡಿಸಿದ ಧೃಢೀಕೃತ ಪಟ್ಟಿಯಲ್ಲಿ ನಮೂದಾಗಿರುವ ಎಲ್ಲ ವಿದ್ಯಾರ್ಥಿಗಳ ದಾಖಲಾತಿಗಳು ಸರಿ ಇರುವ ಬಗ್ಗೆ ಹಾಗೂ ಈ ಸೌಲಭ್ಯಕ್ಕೆ ಅವರು ಅರ್ಹರಿರುವ ಬಗ್ಗೆ ಆನ್‌ಲೈನ್‌ನಲ್ಲಿ ಧೃಢೀಕರಿಸಬೇಕು. ಸದರಿ ದಾಖಲಾತಿಗಳನ್ನು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಛೇರಿಗೆ ಸಲ್ಲಿಸಬೇಕು.

(ಇ) ಈ ರೀತಿ ಸಲ್ಲಿಸಿದ ಮಾಹಿತಿ ಆಧಾರದ ಮೇಲೆ ತಾಲ್ಲೂಕು ಮಟ್ಟದ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ, ಪರಿಶೀಲನೆ ಮಾಡಿ ಅರ್ಹ ವಿದ್ಯಾರ್ಥಿಗಳಿಗೆ "ಊಟ ಮತ್ತು ವಸತಿ ಸಹಾಯ"ವನ್ನು ಮಂಜೂರು ಮಾಡಬೇಕು.

(ಈ) ಈ ಮೇಲಿನಂತೆ ಮಂಜೂರು ಮಾಡಿದ, ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಪ್ರಾಂಶುಪಾಲರು ಪ್ರತಿ ತಿಂಗಳ ಹಾಜರಾತಿಯನ್ನು, ಅವರ ಹೆಸರು ಮತ್ತು ತರಗತಿಯ

ವಿವರಗಳನ್ನು ನಮೂದಿಸಿ ದೃಢೀಕರಿಸಿ, ನಂತರದ ತಿಂಗಳ ಮೊದಲನೇ ವಾರದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಬೇಕು.

(ಊ) ವಿದ್ಯಾರ್ಥಿಗೆ ನೀಡುವ ಸೌಲಭ್ಯಗಳು, ಅವರ ಶೈಕ್ಷಣಿಕ ಪ್ರಗತಿ ಮತ್ತು ಉತ್ತಮ ನಡತೆಗೆ ಒಳಪಟ್ಟಿರುತ್ತದೆ. ಆದ ಕಾರಣ, ಶೈಕ್ಷಣಿಕ ಪ್ರಗತಿಯು ತೃಪ್ತಿಕರವಾಗಿಲ್ಲದಿದ್ದಲ್ಲಿ, ಅಧಿಕೃತವಾಗಿ ಅನುಮತಿಯನ್ನು ಪಡೆಯದೇ ಪದೇ ಪದೇ ತರಗತಿಗಳಿಗೆ ಗೈರು ಹಾಜರಾದಲ್ಲಿ, ಅಥವಾ ಮುಷ್ಕರಗಳಲ್ಲಿ ಭಾಗವಹಿಸಿದ್ದಲ್ಲಿ ಅಥವಾ ಇನ್ಯಾವುದೇ ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿದ್ದಲ್ಲಿ, ಈ ಸೌಲಭ್ಯಗಳನ್ನು ತಕ್ಷಣದಿಂದಲೇ ಹಿಂದಕ್ಕೆ ಪಡೆಯಲಾಗುವುದು. ಆದ ಕಾರಣ ಈ ರೀತಿ ವರ್ತಿಸುವ ವಿದ್ಯಾರ್ಥಿಗಳ ಬಗ್ಗೆ ವೆಬ್‌ಪೋರ್ಟಲ್‌ನಲ್ಲಿ ಷರಾ ನಮೂದಿಸಬೇಕು.

VI. ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳು ಅನುದಾನವನ್ನು ಮರು ಹಂಚಿಕೆ ಮಾಡಲು ಅನುಸರಿಸಬೇಕಾದ ಕಾರ್ಯವಿಧಾನ:

(ಅ) ಆಯಾ ಜಿಲ್ಲೆಗೆ ಆಯಾ ಆರ್ಥಿಕ ವರ್ಷದಲ್ಲಿ ಲಭ್ಯವಿರುವ ಅನುದಾನವನ್ನು ಹಿಂದುಳಿದ ವರ್ಗಗಳ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ಅರ್ಹತೆ ಮತ್ತು ಆದಾಯಕ್ಕೆ (Merit cum Means) ಅನುಗುಣವಾಗಿ, ವಿದ್ಯಾರ್ಥಿಗಳ ಮೆರಿಟ್ ಪಟ್ಟಿಯನ್ನು ತಯಾರಿಸಬೇಕು ಮತ್ತು ಈ ಮೆರಿಟ್ ಪಟ್ಟಿಯಂತೆ, ತಾಲ್ಲೂಕುವಾರು, ಅನುದಾನವನ್ನು ಹಂಚಿಕೆ ಮಾಡಬೇಕು

ಆ) ಜಿಲ್ಲಾ ಪಂಚಾಯತಿಯಿಂದ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ ನೇರವಾಗಿ ಅನುದಾನವನ್ನು ಮೇಲಿನಂತೆ ಮರು ಹಂಚಿಕೆ ಮಾಡಿ ಬಿಡುಗಡೆ ಮಾಡಬೇಕು.

(ಇ) ಸದರಿ ಮೆರಿಟ್ ಪಟ್ಟಿಯ ಹಾರ್ಡ್ ಪ್ರತಿಯನ್ನು ಸಂಬಂಧಪಟ್ಟ ತಾಲ್ಲೂಕು ಅಧಿಕಾರಿಗಳಿಗೆ ಒದಗಿಸುವುದು.

(ಈ) ವಿವಿಧ ಕೋರ್ಸುಗಳು, ಶೈಕ್ಷಣಿಕ ವರ್ಷದ ವಿವಿಧ ತಿಂಗಳುಗಳಲ್ಲಿ ಪ್ರಾರಂಭವಾಗುವ ಕಾರಣ, ವಿಳಂಬವಾಗಿ ಪ್ರಾರಂಭವಾಗುವ ಕೋರ್ಸುಗಳಿಗೆ ಅರ್ಜಿ ಸಲ್ಲಿಸಲು ಪ್ರತ್ಯೇಕ ಕೊನೆಯ ದಿನಾಂಕವನ್ನು ನಿಗದಿಪಡಿಸತಕ್ಕದ್ದು. ಇಂತಹ ಕೋರ್ಸುಗಳಿಗೆ ಪ್ರತ್ಯೇಕವಾಗಿ ಪ್ರವರ್ಗವಾರು ಮೆರಿಟ್ ಪಟ್ಟಿಯನ್ನು ತಯಾರಿಸಬೇಕು ಹಾಗೂ ಇದಕ್ಕಾಗಿ ಅಗತ್ಯವಿರುವಷ್ಟು ಅನುದಾನವನ್ನು ಕಾಯ್ದಿರಿಸಿಕೊಳ್ಳಬೇಕು.

VII. ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ವಿದ್ಯಾರ್ಥಿ ವೇತನ ಮಂಜೂರು ಮಾಡುವ ಕಾರ್ಯವಿಧಾನ:

1. (ಅ) ಒಂದು ತಿಂಗಳ ಸಹಾಯಧನವನ್ನು ಆ ವಿದ್ಯಾರ್ಥಿಯ ಖಾತೆಗೆ ಜಮಾ ಮಾಡಬೇಕಾಗಿದ್ದಲ್ಲಿ, ಆ ವಿದ್ಯಾರ್ಥಿಯ ಹಿಂದಿನ ತಿಂಗಳ, ಕಾಲೇಜಿನ ಹಾಜರಾತಿ ಕನಿಷ್ಠ ಶೇ.75 ರಷ್ಟು ಇರಬೇಕು. ಆದರೆ, ಈ ನಿರ್ಬಂಧ ಶೈಕ್ಷಣಿಕ ವರ್ಷದ ಮಧ್ಯದಲ್ಲಿ ಬರುವ ಸಾರ್ವತ್ರಿಕ ರಜಾ ದಿನಗಳಿಗೆ ಅನ್ವಯವಾಗುವುದಿಲ್ಲ.

(ಆ) ನವೀಕರಣ ಹಾಗೂ ಹೊಸ ವಿದ್ಯಾರ್ಥಿಗಳಿಗೆ ಸಂಬಂಧಿಸಿದಂತೆ, ಶೈಕ್ಷಣಿಕ ವರ್ಷದಲ್ಲಿ ತರಗತಿಗಳು ಪ್ರಾರಂಭವಾದ ತಿಂಗಳಿಂದ ನಂತರದ 10 ತಿಂಗಳ ಅವಧಿಗೆ ಅಥವಾ ಕೋರ್ಸು ಮುಕ್ತಾಯವಾಗುವ ತಿಂಗಳವರೆಗೆ, ಇವುಗಳಲ್ಲಿ ಯಾವುದು ಕಡಿಮೆಯೋ ಆ ಅವಧಿಗೆ, ಈ ಸೌಲಭ್ಯವನ್ನು ಮಂಜೂರು ಮಾಡಬೇಕು. ಆದರೆ, ವಿದ್ಯಾರ್ಥಿಯು, ಕೋರ್ಸಿನ ಪ್ರಾರಂಭದ ಹಾಗೂ ಅಂತಿಮ ತಿಂಗಳುಗಳಲ್ಲಿ, ಕನಿಷ್ಠ 15 ದಿನಗಳ ಹಾಜರಾತಿ ಹೊಂದಿರಬೇಕು.

2. (ಅ) ಪ್ರಾಂಶುಪಾಲರು ವೆಬ್‌ಪೋರ್ಟಲ್‌ನಲ್ಲಿ ಅಪ್‌ಲೋಡ್ ಮಾಡಿರುವ ವಿದ್ಯಾರ್ಥಿಗಳ ತಿಂಗಳ ಹಾಜರಾತಿಯನ್ವಯ, ಶೇಕಡ 75 ರಷ್ಟು ಹಾಜರಾತಿ ಇರುವ ತಿಂಗಳುಗಳಿಗೆ, ರೂ.1500/–

ರಂತೆ, ಊಟ ಮತ್ತು ವಸತಿ ಸಹಾಯದ ಮೊತ್ತವನ್ನು ಮಂಜೂರು ಮಾಡಬೇಕು.

(ಆ) ಪ್ರತಿ ಮಾಹೆವಾರು, ಮಂಜೂರಾತಿ ಆದೇಶ ಮತ್ತು ಬ್ಯಾಂಕುವಾರು ಬಿಲ್ಲುಗಳನ್ನು ಇಲಾಖೆಯ ವೆಬ್‌ಪೋರ್ಟಲ್‌ನಿಂದ ಡೌನ್‌ಲೋಡ್ ಮಾಡಿಕೊಂಡು, ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಮೇಲು ರುಜು ಪಡೆದುಕೊಳ್ಳಬೇಕು.

(ಇ) ಸದರಿ ಬಿಲ್ಲನ್ನು, ಬ್ಯಾಂಕುವಾರು ವಿದ್ಯಾರ್ಥಿಗಳ ಬ್ಯಾಂಕ್ ಅಕೌಂಟ್ ಮತ್ತು ಐ.ಎಫ್.ಎಸ್.ಸಿ ಕೋಡ್ ನೊಂದಿಗೆ ಖಜಾನೆಗೆ (ಸಾಫ್ಟ್ ಪ್ರತಿಯೊಂದಿಗೆ) ಸಲ್ಲಿಸಿ, ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಆನ್‌ಲೈನ್ ಮೂಲಕ ಜಮಾ ಮಾಡಲು ಕ್ರಮ ತೆಗೆದುಕೊಳ್ಳಬೇಕು.

3. ಕೋರ್ಸಿನ ಅವಧಿ ಎರಡು ಆರ್ಥಿಕ ವರ್ಷಗಳಿಗೆ ವಿಸ್ತರಣೆಯಾದಲ್ಲಿ, ಆಯಾ ಆರ್ಥಿಕ ವರ್ಷಕ್ಕೆ ಹಂಚಿಕೆಯಾದ ಅನುದಾನದಿಂದ, ಮೇಲಿನ ನಿಬಂಧನೆಗಳಿಗೆ ಒಳಪಟ್ಟು, ಈ ಸೌಲಭ್ಯವನ್ನು ಮಂಜೂರು ಮಾಡಬೇಕು.

4. ಸೆಮಿಸ್ಟರ್ ಪದ್ಧತಿ ಇರುವ ಕೋರ್ಸುಗಳಿಗೆ ಸಂಬಂಧಪಟ್ಟಂತೆ, ಆ ಶೈಕ್ಷಣಿಕ ವರ್ಷದಲ್ಲಿ ಬರುವ ಸೆಮಿಸ್ಟರುಗಳು ಎಂದರ್ಥ.

VIII. ತಪ್ಪು ಮಾಹಿತಿಗೆ ದಂಡ:

1. ಅರ್ಜಿದಾರರು ಅಥವಾ ಶಿಕ್ಷಣ ಸಂಸ್ಥೆಯು, ತಪ್ಪು ಮಾಹಿತಿ ನೀಡಿದ್ದಲ್ಲಿ, ಅಂತಹವರ ವಿರುದ್ಧ ನಿಯಮಾನುಸಾರ ಈ ಕೆಳಗಿನಂತೆ ಕ್ರಮ ತೆಗೆದುಕೊಳ್ಳಲಾಗುವುದು.

2. ಭಾರತೀಯ ದಂಡ ಸಂಹಿತೆಯ ಕಲಂ 177 ಮತ್ತು 181ರ ಪ್ರಕಾರ, ಶಿಕ್ಷೆಗೆ ಗುರಿಪಡಿಸಲಾಗುತ್ತದೆ.

3. ಕಾನೂನಿನಂತೆ ಕ್ರಮ ಜರುಗಿಸುವುದರ ಜೊತೆಗೆ, ವಿದ್ಯಾರ್ಥಿಯು ಪಡೆದ ಒಟ್ಟು ಆರ್ಥಿಕ ಸಹಾಯವನ್ನು ಆ ವಿದ್ಯಾರ್ಥಿಯಿಂದ ಅಥವಾ ಅವರ ತಂದೆ–ತಾಯಿ / ಪೋಷಕರಿಂದ, ಭೂ ಕಂದಾಯ ಬಾಕಿಯೆಂದು ವಸೂಲಿ ಮಾಡಲಾಗುವುದು.

4. ಮಂಜೂರು ಮಾಡುವ ಅಧಿಕಾರಿಗಳು ಸಹ, ನಿಯಮಗಳ ವಿರುದ್ಧ ಮಂಜೂರು ಮಾಡಿ, ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟು ಮಾಡಿದಲ್ಲಿ, ಅಂತಹವರ ವಿರುದ್ಧ ಶಿಸ್ತಿನ ಕ್ರಮ ಜರುಗಿಸುವುದಲ್ಲದೆ ಕ್ರಿಮಿನಲ್ ಮೊಕದ್ದಮೆ ಹೂಡಲಾಗುವುದು ಹಾಗೂ ಈ ರೀತಿ ತಪ್ಪಾಗಿ ಪಾವತಿಯಾದ ಮೊತ್ತವನ್ನು ಅವರ ವೇತನದಿಂದ ವಸೂಲಿ ಮಾಡಲಾಗುವುದು.

IX. ಇತರೆ:

1. ಪ್ರವರ್ಗವಾರು ಜಾತಿಗಳ ಪಟ್ಟಿ, ಕುಟುಂಬದ ವಾರ್ಷಿಕ ವರಮಾನ, ಅರ್ಹತೆ, ಇತ್ಯಾದಿ, ಸರ್ಕಾರವು ಕಾಲ ಕಾಲಕ್ಕೆ ಹೊರಡಿಸುವ ಆದೇಶಗಳನ್ವಯ ಪರಿಷ್ಕರಣೆಗೆ ಒಳಪಟ್ಟಿರುತ್ತದೆ.

2. ಈ ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಅರ್ಜಿ ನಮೂನೆ, ಕಾರ್ಯವಿಧಾನ ಇತ್ಯಾದಿಗಳನ್ನು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಆಯುಕ್ತರು ನಿರ್ಧರಿಸುವುದು.

(ಬಿ.ಹೆಚ್. ಅನಿಲ್ ಕುಮಾರ್)

ಸರ್ಕಾರದ ಪ್ರಧಾನ ಕಾರ್ಯದರ್ಶಿ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

ಕರ್ನಾಟಕ ಸರ್ಕಾರ

ಸಂಖ್ಯೆ: ಬಿಸಿಡಬ್ಲ್ಯೂ 516 ಬಿಎಂಎಸ್ 2013

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸಸೌಧ
ಬೆಂಗಳೂರು, ದಿನಾಂಕ:18/11/2014

ತಿದ್ದುಪಡಿ ಮತ್ತು ಸೇರ್ಪಡೆ ಆದೇಶ

ತಿದ್ದುಪಡಿ

ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 516 ಬಿಎಂಎಸ್ ದಿನಾಂಕ:24.09.2013 ರ ಆದೇಶ ಭಾಗದಲ್ಲಿನ 6ನೇ ಸಾಲಿನಲ್ಲಿ **"ಊಟ ಮತ್ತು ವಸತಿ ಸಹಾಯ ಯೋಜನೆ"** ಎಂಬುದರ ಬದಲಾಗಿ **"ವಿದ್ಯಾಸಿರಿ" ಊಟ ಮತ್ತು ವಸತಿ ಸಹಾಯ ಯೋಜನೆ** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಸೇರ್ಪಡೆ

ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 516 ಬಿಎಂಎಸ್ ದಿನಾಂಕ:24.09.2013 ರ ಮಾರ್ಗಸೂಚಿಯ ಕಂಡಿಕೆ VIIರ ಉಪಕಂಡಿಕೆ–4 ರ ನಂತರ ಉಪಕಂಡಿಕೆ–5ನ್ನು ಸೇರಿಸಿ ಓದಿಕೊಳ್ಳುವುದು.

> 5. (ಅ) ಮೊದಲನೇ ಆದ್ಯತೆಯಲ್ಲಿ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಸೌಲಭ್ಯವನ್ನು ಮಂಜೂರು ಮಾಡಬೇಕು. ಇದಕ್ಕಾಗಿ ವಾರ್ಷಿಕವಾಗಿ ಬೇಕಾಗಬಹುದಾದ ಅನುದಾನವನ್ನು ಮೀಸಲಿರಿಸಿಕೊಳ್ಳುವುದು. ಈ

ರೀತಿ ಮಂಜೂರು ಮಾಡುವಾಗ ಇದೇ ಆದೇಶದ ಮಾರ್ಗಸೂಚಿಯ ನಿಬಂಧನೆಗಳನ್ನು ಪಾಲಿಸತಕ್ಕದ್ದು.

(ಆ) ನವೀಕರಣ ವಿದ್ಯಾರ್ಥಿಗಳಿಗೆ ಈ ಯೋಜನೆಯನ್ನು ಮಂಜೂರು ಮಾಡಿ ಉಳಿಯುವ ಅನುದಾನವನ್ನು ಜಿಲ್ಲಾವಾರು ವಸತಿನಿಲಯಗಳಲ್ಲಿ ಪ್ರವೇಶ ಕೋರಿ ಅರ್ಜಿ ಸಲ್ಲಿಸಿ, ಪ್ರವೇಶ ದೊರೆಯದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹಂಚಿಕೆ ಮಾಡಿಕೊಳ್ಳತಕ್ಕದ್ದು.

(ಇ) ಎರಡನೇ ಆದ್ಯತೆಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸಿದ್ದು, ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರೆಯದ ವಿದ್ಯಾರ್ಥಿಗಳಿಗೆ ಸೌಲಭ್ಯವನ್ನು ಮಂಜೂರು ಮೂಲಕ ಪರಿಗಣಿಸುವುದು. ಈ ಸೌಲಭ್ಯಕ್ಕಾಗಿ ಅಂತಹ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು. ಈ ರೀತಿ ಮಂಜೂರು ಮಾಡುವಾಗ ಇದೇ ಆದೇಶದ ಮಾರ್ಗಸೂಚಿಯಲ್ಲಿನ ಕಂಡಿಕೆ IV ಅನುದಾನ ಹಂಚಿಕೆ ವಿಧಾನದ ಕ್ರಮವನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಒಂದು ವೇಳೆ ಯಾವುದೇ ಒಂದು ಪ್ರವರ್ಗದಲ್ಲಿನ ಎಲ್ಲಾ ಪರಿಗಣಿಸಿದ ನಂತರವೂ ಅನುದಾನ

ಕರ್ನಾಟಕ ಸರ್ಕಾರ

ಸಂಖ್ಯೆ: ಬಿಸಿಡಬ್ಲ್ಯೂ 516 ಬಿಎಂಎಸ್ 2013

ಕರ್ನಾಟಕ ಸರ್ಕಾರದ ಸಚಿವಾಲಯ

ವಿಕಾಸಸೌಧ

ಬೆಂಗಳೂರು, ದಿನಾಂಕ:03/11/2014

ತಿದ್ದುಪಡಿ ಮತ್ತು ಸೇರ್ಪಡೆ ಆದೇಶ

ತಿದ್ದುಪಡಿ

ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 516 ಬಿಎಂಎಸ್ ದಿನಾಂಕ:24.09.2013 ರ ಆದೇಶ ಭಾಗದಲ್ಲಿನ 6ನೇ ಸಾಲಿನಲ್ಲಿ **"ಊಟ ಮತ್ತು ವಸತಿ ಸಹಾಯ ಯೋಜನೆ"** ಎಂಬುದರ ಬದಲಾಗಿ **"ವಿದ್ಯಾಸಿರಿ" ಊಟ ಮತ್ತು ವಸತಿ ಸಹಾಯ ಯೋಜನೆ"** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.

ಸೇರ್ಪಡೆ

ಸರ್ಕಾರದ ಆದೇಶ ಸಂಖ್ಯೆ ಬಿಸಿಡಬ್ಲ್ಯೂ 516 ಬಿಎಂಎಸ್ ದಿನಾಂಕ:24.09.2013 ರ ಮಾರ್ಗಸೂಚಿಯ ಕಂಡಿಕೆ VIIರ ಉಪಕಂಡಿಕೆ–4 ರ ನಂತರ ಉಪಕಂಡಿಕೆ–5ನ್ನು ಸೇರಿಸಿ ಓದಿಕೊಳ್ಳುವುದು.

> 5. (ಅ) ಮೊದಲನೇ ಆದ್ಯತೆಯಲ್ಲಿ ನವೀಕರಣ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಊಟ ಮತ್ತು ವಸತಿ ಸಹಾಯ ಸೌಲಭ್ಯವನ್ನು ಮಂಜೂರು ಮಾಡಬೇಕು. ಇದಕ್ಕಾಗಿ ವಾರ್ಷಿಕವಾಗಿ ಬೇಕಾಗಬಹುದಾದ ಅನುದಾನವನ್ನು ಮೀಸಲಿರಿಸಿಕೊಳ್ಳುವುದು. ಈ ರೀತಿ ಮಂಜೂರು ಮಾಡುವಾಗ ಇದೇ ಆದೇಶದ ಮಾರ್ಗಸೂಚಿಯ ನಿಬಂಧನೆಗಳನ್ನು ಪಾಲಿಸತಕ್ಕದ್ದು.

(ಆ) ನವೀಕರಣ ವಿದ್ಯಾರ್ಥಿಗಳಿಗೆ ಈ ಯೋಜನೆಯನ್ನು ಮಂಜೂರು ಮಾಡಿ ಉಳಿಯುವ ಅನುದಾನವನ್ನು ಜಿಲ್ಲಾವಾರು ವಸತಿನಿಲಯಗಳಲ್ಲಿ ಪ್ರವೇಶ ಕೋರಿ ಅರ್ಜಿ ಸಲ್ಲಿಸಿ, ಪ್ರವೇಶ ದೊರೆಯದ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಹಂಚಿಕೆ ಮಾಡಿಕೊಳ್ಳತಕ್ಕದ್ದು.

(ಇ) ಎರಡನೇ ಆದ್ಯತೆಯಲ್ಲಿ ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸಿದ್ದು, ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ ದೊರೆಯದ ವಿದ್ಯಾರ್ಥಿಗಳಿಗೆ ಸೌಲಭ್ಯವನ್ನು ಮಂಜೂರು ಮೂಲಕ ಪರಿಗಣಿಸುವುದು. ಈ ಸೌಲಭ್ಯಕ್ಕಾಗಿ ಅಂತಹ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು. ಈ ರೀತಿ ಮಂಜೂರು ಮಾಡುವಾಗ ಇದೇ ಆದೇಶದ ಮಾರ್ಗಸೂಚಿಯಲ್ಲಿನ ಕಂಡಿಕೆ IV ಅನುದಾನ ಹಂಚಿಕೆ ವಿಧಾನದ ಕ್ರಮವನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ಒಂದು ವೇಳೆ ಯಾವುದೇ ಒಂದು ಪ್ರವರ್ಗದಲ್ಲಿನ ಎಲ್ಲಾ ಪರಿಗಣಿಸಿದ ನಂತರವೂ ಅನುದಾನ ಲಭ್ಯವಾದಲ್ಲಿ, ಇನ್ನುಳಿದ ಹಿಂದುಳಿದ ಪ್ರವರ್ಗಗಳ ವಿದ್ಯಾರ್ಥಿಗಳಿಗೆ ಅನುದಾನ ಹಂಚಿಕೆ ಮಾಡಿ, ಮೆರಿಟ್ ಮತ್ತು ಆದಾಯದ ಆಧಾರದ ಮೇಲೆ ಮಂಜೂರಾತಿ ನೀಡತಕ್ಕದ್ದು. ಇಂತಹ ವಿದ್ಯಾರ್ಥಿಗಳಿಗೆ ಇದೇ ಆದೇಶದ ಮಾರ್ಗಸೂಚಿಯಲ್ಲಿನ ಕಂಡಿಕೆ–II ಅರ್ಹತೆ ಉಪಕಂಡಿಕೆ–2 (ಇ) ಮತ್ತು (ಈ) ನಿಬಂಧನೆಗಳು ಅನ್ವಯವಾಗುವುದಿಲ್ಲ.

(ಈ) ಮೂರನೇ ಆದ್ಯತೆಯಲ್ಲಿ ಹೊಸದಾಗಿ ಆನ್‌ಲೈನ್ ಮೂಲಕ "ವಿದ್ಯಾಸಿರಿ" ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ವಿದ್ಯಾರ್ಥಿಗಳು ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸತಕ್ಕದ್ದು.

(ಪಿ.ಆರ್. ಕಲಾವತಿ)
ಸರ್ಕಾರದ ಉಪ ಕಾರ್ಯದರ್ಶಿ
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಗೆ:

1. ಮಹಾಲೇಖಪಾಲರು, (ಎ ಮತ್ತು ಇ) ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ(ವೆಚ್ಚ–3), ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
6. ಎಲ್ಲಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು.

ಆಯುಕ್ತರ ಮುಖಾಂತರ

7 ರಾಜ್ಯದ ಎಲ್ಲಾ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು

8. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
9. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ.
10. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತಕಾರ್ಯದರ್ಶಿಗಳು.
11. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.
14. ಆಂತರಿಕ ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
15. ಶಾಖಾ ರಕ್ಷ ಕಡತ.

ವಿಧಾನ ಸಭಾ ಸದಸ್ಯರಾದ ಶ್ರೀ ರವಿ ಸುಬ್ರಹ್ಮಣ್ಯ ಎಲ್.ಎ (ಬಸವನಗುಡಿ) ಇವರ ಚುಕ್ಕೆ ಗುರುತಿನ ಪ್ರಶ್ನೆ ಸಂ. 287ಕ್ಕೆ ಪೂರಕ ಟಿಪ್ಪಣಿ

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ವಿದ್ಯಾರ್ಥಿಗಳಿಗಾಗಿ ವಿದ್ಯಾಸಿರಿ– ಊಟ ಮತ್ತು ವಸತಿ ಯೋಜನೆಯನ್ನು 2013–14ನೇ ಸಾಲಿನಿಂದ ಜಾರಿಗೆ ತರಲಾಗಿದೆ. ಈ ಯೋಜನೆಯಡಿ ಆಯ್ಕೆಯಾದ ವಿದ್ಯಾರ್ಥಿಗಳಿಗೆ, ಪ್ರತಿ ತಿಂಗಳಿಗೆ ರೂ.1500/– ರಂತೆ ಶೈಕ್ಷಣಿಕ ಅವಧಿಯ 10 ತಿಂಗಳಿಗೆ ಒಟ್ಟು ರೂ.15000/– ಸಹಾಯಧನವನ್ನು ಅವರ ಬ್ಯಾಂಕ್ ಖಾತೆಗೆ, ಜಮಾ ಮಾಡಲಾಗುತ್ತಿದೆ.

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ – ಊಟ ಮತ್ತು ವಸತಿ ಸಹಾಯ ಯೋಜನೆಗೆ ಮಂಜೂರಾತಿ ನೀಡುವಾಗ ಆಯಾ ಶೈಕ್ಷಣಿಕ ವರ್ಷದಲ್ಲಿ ಲಭ್ಯವಾಗುವ ಅನುದಾನವನ್ನು ಪ್ರವರ್ಗವಾರು ಈ ಕೆಳಗಿನ ಮೀಸಲಾತಿಯಂತೆ ಮರು ಹಂಚಿಕೆ ಮಾಡಿ ಮಂಜೂರಾತಿ ನೀಡಲಾಗುತ್ತಿದೆ.

ಆಯಾ ಶೈಕ್ಷಣಿಕ ವರ್ಷದಲ್ಲಿ ಲಭ್ಯವಾಗುವ ಅನುದಾನ ಹಾಗೂ ಪ್ರವರ್ಗವಾರು ಹಂಚಿಕೆ ಮಾಡಲಾಗುವ ಅನುದಾನದ ವಿವರಗಳು

ಹಿಂದುಳಿದ ವರ್ಗಗಳ ಪ್ರವರ್ಗಗಳು	ಶೇಕಡಾವಾರು ಹಂಚಿಕೆ ಮಾಡುವ ಅನುದಾನ
ಪ್ರವರ್ಗ– 1	15%
ಪ್ರವರ್ಗ– 2ಎ	53%
ಪ್ರವರ್ಗ –3ಎ	14%
ಪ್ರವರ್ಗ –3ಬಿ	18%
ಒಟ್ಟು	**100%**

ಆಯಾ ಆರ್ಥಿಕ ವರ್ಷಕ್ಕೆ ಲಭ್ಯವಾಗುವ ಅನುದಾನದ ಮಿತಿಗೊಳಪಟ್ಟು, ಅರ್ಹತೆ ಮತ್ತು ಆದಾಯಕ್ಕೆ (Merit cum Means) ಅನುಗುಣವಾಗಿ ಮಂಜೂರಾತಿ ನೀಡಲಾಗುತ್ತಿದೆ.

ವಿದ್ಯಾಸಿರಿ ಯೋಜನೆಗೆ ಮಂಜೂರಾತಿ ನೀಡುವಾಗ ಈ ಕೆಳಕಂಡಂತೆ ಮಾನದಂಡಗಳನ್ನು ನಿಗದಿಪಡಿಸಲಾಗಿದೆ.

1) ಯಾವುದೇ ಇಲಾಖೆಯ ಸರ್ಕಾರಿ/ಸರ್ಕಾರಿ ಅನುದಾನಿತ ವಿದ್ಯಾರ್ಥಿ ನಿಲಯ/ವಸತಿ ಕಾಲೇಜುಗಳಲ್ಲಿ, ಪ್ರವೇಶ ದೊರೆಯದ ಮೆಟ್ರಿಕ್

ನಂತರದ ಹಾಗೂ ಪಿ.ಹೆಚ್‌ಡಿ ಕೋರ್ಸುಗಳಲ್ಲಿ ವ್ಯಾಸಂಗ ಮಾಡುವ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಯೋಜನೆಯ ಸೌಲಭ್ಯ ನೀಡಲಾಗುವುದು.

2) ವಿದ್ಯಾರ್ಥಿಗಳು, 1) ವಿದ್ಯಾರ್ಥಿ ನಿಲಯಗಳ ಪ್ರವೇಶ, 2) ಊಟ ಮತ್ತು ವಸತಿ ಸಹಾಯ ಯೋಜನೆ (ವಿದ್ಯಾಸಿರಿ ಮತ್ತು 3) ಮೆಟ್ರಿಕ್ ನಂತರ ವಿದ್ಯಾರ್ಥಿ ವೇತನ – ಇವುಗಳಲ್ಲಿ ಯಾವುದಾದರು ಒಂದು ಸೌಲಭ್ಯಕ್ಕೆ ಮಾತ್ರ ಅರ್ಹರಿರುತ್ತಾರೆ.

3) ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶದವರಾಗಿರಬೇಕು ಹಾಗೂ ವ್ಯಾಸಂಗ ಮಾಡುವ ಕಾಲೇಜಿನಿಂದ ಕನಿಷ್ಟ 5 ಕಿ.ಮೀ ದೂರದವರಾಗಿರಬೇಕು. ಆದರೆ, ವಿದ್ಯಾರ್ಥಿಯ ಸ್ವಂತ ಸ್ಥಳ/ನಗರ/ಪಟ್ಟಣ ಆಗಿದ್ದು, ಅವರು ಬೇರೆ ನಗರ ಪಟ್ಟಣದಲ್ಲಿ ಇರುವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆ.

4) ವಿದ್ಯಾರ್ಥಿಯ ತಂದೆ–ತಾಯಿ/ಪೋಷಕರ ಕುಟುಂಬದ, ಒಟ್ಟು ವಾರ್ಷಿಕ ವರಮಾನ ಪ್ರವರ್ಗ–1ಕ್ಕೆ ರೂ.2.50 ಲಕ್ಷ ಹಾಗೂ ಪ್ರವರ್ಗ 2ಎ, 3ಎ ಮತ್ತು 3ಬಿ ವಿದ್ಯಾರ್ಥಿಗಳಿಗೆ ರೂ.1.00 ಲಕ್ಷ ಆದಾಯ ಮಿತಿಯೊಳಗಿರಬೇಕು.

5) ವಿದ್ಯಾರ್ಥಿಯ ಹಾಜರಾತಿಯು ಕನಿಷ್ಠ ಶೇಕಡ 75 ರಷ್ಟಿರಬೇಕು.

6) ಸಮಾನ ಕೋರ್ಸುಗಳಲ್ಲಿ ಒಂದಕ್ಕಿಂತ ಹೆಚ್ಚು ಬಾರಿ ವ್ಯಾಸಂಗ ಮಾಡುತ್ತಿದ್ದಲ್ಲಿ, ಅಂತಹವರು ಅರ್ಹರಿರುವುದಿಲ್ಲ.

ವಿದ್ಯಾಸಿರಿ– ಊಟ ಮತ್ತು ವಸತಿ ಸಹಾಯ ಯೋಜನೆಗೆ, ಮಂಜೂರಾತಿ ಕೋರಿ 2013–14ನೇ ಸಾಲಿನಲ್ಲಿ 2,16,221 ಅರ್ಜಿಗಳು ಸಲ್ಲಿಕೆಯಾಗಿದ್ದು, ಇದರಲ್ಲಿ 31,955 ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ.3420.00 ಲಕ್ಷಗಳನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ. 2014–15ನೇ ಸಾಲಿನಲ್ಲಿ 4,80,640 ಆನ್‌ಲೈನ್ ಮೂಲಕ ಅರ್ಜಿಗಳು ಸಲ್ಲಿಕೆಯಾಗಿದ್ದು, ಇದರಲ್ಲಿ 66,659 ಹಿಂದುಳಿದ ವರ್ಗಗಳ

ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಿ ರೂ.7685.00 ಲಕ್ಷಗಳನ್ನು ವಿದ್ಯಾರ್ಥಿಗಳ ಬ್ಯಾಂಕ್ ಖಾತೆಗೆ ಜಮಾ ಮಾಡಲಾಗಿದೆ.

ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ನೆರವಾಗುವ ದೃಷ್ಟಿಯಿಂದ, ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗಾಗಿ ವಿದ್ಯಾಸಿರಿ– ಊಟ ಮತ್ತು ವಸತಿ ಸಹಾಯ ಯೋಜನೆ ಜಾರಿಗೆ ತರಲಾಗಿದೆ. ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ದೊರಕದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದ್ದು, ಇದರಲ್ಲಿ ಅರ್ಹರಿರುವ ಹಿಂದುಳಿದ ವರ್ಗಗಳ ಎಲ್ಲಾ ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಲು ಅನುದಾನದ ಕೊರತೆಯಿಂದ ಸಾಧ್ಯವಾಗುತ್ತಿಲ್ಲ.

ಪ್ರಸಕ್ತ ವರ್ಷದಲ್ಲಿ ಇಲಾಖೆಗೆ ಈ ಯೋಜನೆಗಾಗಿ ರೂ.11250.00 ಲಕ್ಷ ಅನುದಾನ ಒದಗಿಸಿದ್ದು, ಇದರಲ್ಲಿ ನವೀಕರಣ ಹಾಗೂ ಹಿಂದುಳಿದ ವರ್ಗಗಳ 75,000 ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಲು ಸಾಧ್ಯವಾಗುತ್ತದೆ. ಸದರಿ ಅನುದಾನದಲ್ಲಿಯೇ ಆರ್ಥಿಕವಾಗಿ ಹಿಂದುಳಿದ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೂ ಸಹ ಮಂಜೂರಾತಿ ನೀಡಲು ಸಾಧ್ಯವಾಗುವುದಿಲ್ಲ. ಪ್ರಸಕ್ತ ಜಾರಿಯಲ್ಲಿರುವ ಈ ಕಾರ್ಯಕ್ರಮದ ಮಾರ್ಗಸೂಚಿಯಲ್ಲಿ ಕೇವಲ ಹಿಂದುಳಿದ ವರ್ಗಗಳ ಪ್ರವರ್ಗಗಳಡಿ ಬರುವ ವಿದ್ಯಾರ್ಥಿಗಳಿಗೆ ಮಂಜೂರಾತಿ ನೀಡಲು ಮಾತ್ರ ಅವಕಾಶವಿರುತ್ತದೆ. ಆರ್ಥಿಕವಾಗಿ ಹಿಂದುಳಿದ ಸಾಮಾನ್ಯ ವರ್ಗದ ವಿದ್ಯಾರ್ಥಿಗಳಿಗೂ ಈ ಯೋಜನೆಯನ್ನು ವಿಸ್ತರಿಸಲು ಹೆಚ್ಚುವರಿ ಅನುದಾನದ ಅವಶ್ಯಕತೆಯಿದ್ದು ಹಾಗೂ ಸರ್ಕಾರದ ಆದೇಶಗಳಿಗೆ ಸೂಕ್ತ ತಿದ್ದುಪಡಿಯನ್ನು ಮಾಡಬೇಕಾಗಿರುತ್ತದೆ. ಈ ವಿಷಯವು ಪರಿಶೀಲನೆಯಲ್ಲಿದೆ.

ಶ್ರೀ ಸಿ.ಟಿ. ರವಿ (ಶ್ರೀ ರವಿಸುಬ್ರಹ್ಮಣ್ಯ ಎಲ್.ಎ ಇವರ ಪರವಾಗಿ):– ಮಾನ್ಯ ಅಧ್ಯಕ್ಷರೆ, ಉತ್ತರವನ್ನು ಒದಗಿಸಿದ್ದಾರೆ. ಅದರಲ್ಲಿ 2014–15ನೇ ಸಾಲಿನ ಒಟ್ಟು total ತಪ್ಪಿದೆ. ಎಲ್ಲವನ್ನು ಪ್ರವರ್ಗ–1, ಪ್ರವರ್ಗ–2ಎ ಎಲ್ಲವನ್ನೂ ಸೇರಿಸಿದರೆ 502887 ಆಗಬೇಕು. ಆದರೆ ಅವರು ಕೊಟ್ಟಿರುವುದು 480640 ಎಂದು. ಈ ಉತ್ತರ ತಯಾರು ಮಾಡುವವರಿಗೆ total ಎಷ್ಟಾಗುತ್ತದೆಂದು ಲೆಕ್ಕವೂ ಗೊತ್ತಿಲ್ಲದಿದ್ದರೆ ತಪ್ಪಾಗಿಬಿಡುತ್ತದೆ. ನೀವೆಲ್ಲಾ ಸೇರಿಸಿ total ಮಾಡಿ

ನೋಡಿ. ಒಟ್ಟು ಬಂದಿರುವ ಅರ್ಜಿಗಳ ಸಂಖ್ಯೆ 502887 ಆಗಬೇಕು. ಒಟ್ಟು ಅರ್ಜಿಯಲ್ಲಿ ಈಗ ಕೊಡಲಿಕ್ಕೆ ಸಾಧ್ಯವಾಗುತ್ತಿರುವುದು 75,000 ಜನರಿಗೆ ಮಾತ್ರ. ಈಗ 5 ಲಕ್ಷ ಅರ್ಜಿಗಳು ಬಂದಿವೆ. 75,000 ಜನರಿಗೆ ಮಾತ್ರ ಆಯ್ಕೆ ಮಾಡುತ್ತೇವೆಂದು ಹೇಳಿದ್ದಾರೆ. ಉಳಿದವರ ಸ್ಥಿತಿ ಏನು? ಅವರನ್ನು ಆಯ್ಕೆ ಮಾಡದಿದ್ದರೆ ಅವರು ವಂಚಿತರಾಗುವುದಿಲ್ಲವೇ? ಅವರನ್ನು ಸಹ ಆಯ್ಕೆ ಮಾಡುವುದಕ್ಕೆ ಬೇಕಾದಂಥ ಅನುದಾನ ಇಡಬೇಕು ಎಂಬುದು ನಮ್ಮ ಅಭಿಪ್ರಾಯವಾಗಿದೆ.

ಶ್ರೀ ಟಿ.ಬಿ. ಜಯಚಂದ್ರ (ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು) (ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಪರವಾಗಿ):– ಈ 'ವಿದ್ಯಾಸಿರಿ' ಯೋಜನೆಯಡಿಯಲ್ಲಿ ನಾವು online ಮೇಲೆ ಬರತಕ್ಕಂಥ ಅರ್ಜಿಗಳ ಸಂಖ್ಯೆಯಲ್ಲಿ ವ್ಯತ್ಯಾಸ ಇದೆ ಎಂದು ಹೇಳುತ್ತಿದ್ದೀರಿ. ನಾವು ಆ ಸೌಲಭ್ಯವನ್ನು ಕೊಡತಕ್ಕಂಥದ್ದು ಕೇವಲ 75000 ಜನರಿಗೆ ಮಾತ್ರ. ಹಾಗಾಗಿ ನಮ್ಮ ಹಣಕಾಸಿನ ಇತಿಮಿತಿಯಲ್ಲಿಯೂ ನೋಡಬೇಕಾಗುತ್ತದೆ. ನಮಗೆ ಈ ವರ್ಷ ಇರುವಂಥದ್ದು ಸುಮಾರು 112.50 ಕೋಟಿ ರೂಪಾಯಿಗಳು. ಪ್ರಾರಂಭದಲ್ಲಿ 34.00 ಕೋಟಿ ರೂಪಾಯಿಗಳಿತ್ತು. ತದನಂತರ 76.85 ಕೋಟಿ ರೂಪಾಯಿಗಳಾಯಿತು. ಈ ವರ್ಷ 112.50 ಕೋಟಿ ರೂಪಾಯಿಗಳಿವೆ, ಅಷ್ಟಕ್ಕೇ ಸಿಮೀತಗೊಳಿಸಬೇಕಾಗುತ್ತದೆ. ನೀವು ಕೊಡುತ್ತಿರುವಂಥ ಸಲಹೆ ಉತ್ತಮವಾಗಿದೆ. ಆದರೆ ಮುಂದಿನ ದಿನದಲ್ಲಿ ಅದನ್ನು ಹೆಚ್ಚಿಸುವಂಥ ಪ್ರಯತ್ನವನ್ನು ಮಾಡೋಣ.

ಶ್ರೀ ಸಿ.ಟಿ. ರವಿ:– 30.1.2014 ರಂದು ಒಂದು ಪ್ರಶ್ನೆ ಕೇಳಿದಾಗ, ವಿದ್ಯಾಸಿರಿ ಯೋಜನೆಯನ್ನು ಸಾಮಾನ್ಯ ವರ್ಗಕ್ಕೂ ವಿಸ್ತರಣೆ ಮಾಡುತ್ತೇವೆಂದು ಹೇಳಿದ್ದರ ಜೊತೆಗೆ ಅಂದು ಸಚಿವರು ಒಂದು ಉತ್ತರವನ್ನು ಕೊಟ್ಟಿದ್ದರು. ಆ ಉತ್ತರದಲ್ಲಿ ಅಂದಾಜು ಒಟ್ಟು 30 ಸಾವಿರ ವಿದ್ಯಾರ್ಥಿಗಳಿಗೆ ಮುಂದಿನ ವಾರ ನಾವು ವಿತರಣೆ ಮಾಡುವ ಕೆಲಸ ಮಾಡುತ್ತೇವೆ. ಬ್ರಾಹ್ಮಣ, ವೈಶ್ಯರನ್ನು ಹೊರಗಿಟ್ಟಿದ್ದೇವೆ ಎಂದರು. ಹಿಂದುಳಿದ ವರ್ಗಗಳ ಇಲಾಖೆಯ

ಆಯುಕ್ತರು ಹಾಗೂ ಅಧ್ಯಕ್ಷರು ಇಲ್ಲವೇ ಇರುವುದರಿಂದ ಅಭಿಪ್ರಾಯ ಪಡೆದು ಮಾಡಬೇಕಾಗಿದೆ. ಆದರೂ ಪರವಾಗಿಲ್ಲ, ನಾವು ವಿದ್ಯಾಸಿರಿ ಯೋಜನೆಯನ್ನು ಮುಂದಿನ ಶೈಕ್ಷಣಿಕ ವರ್ಷದಲ್ಲಿ ವೈಶ್ಯರು, ಬ್ರಾಹ್ಮಣರು ಅವರಿಗೂ ಸಹ ಕೊಡುವಂಥ ಆದೇಶ ಮುಂದಿನ ವಾರದಲ್ಲಿಯೇ ಜಾರಿಯಾಗುತ್ತದೆ. ಇದು ಸಚಿವರು 30.1.2014 ರಂದು ಕೊಟ್ಟ ಉತ್ತರವಾಗಿದೆ. ಒಂದು ವಾರದಲ್ಲಿ ಆಗುತ್ತದೆ ಎಂದು ಉತ್ತರದಲ್ಲಿ ಹೇಳಿದ್ದರು.

ಅಧ್ಯಕ್ಷರು:– ಇವತ್ತಿನವರೆಗೂ ಆದೇಶ ಹೊರಡಿಸಿಲ್ಲ. ಹೇಳಿ.

ಶ್ರೀ ಸಿ.ಟಿ. ರವಿ:– ನಿಮ್ಮ ಸರ್ಕಾರದಲ್ಲಿ ಒಂದು ವಾರಕ್ಕೆ ಎಷ್ಟು ದಿವಸಗಳು? ಆ ಆದೇಶವನ್ನು ಹೊರಡಿಸಿರುವಿರಾ? ಸಾಮಾನ್ಯ ವರ್ಗಕ್ಕೂ ವಿಸ್ತರಣೆ ಮಾಡುವಂಥ ಆದೇಶವನ್ನು ಹೊರಡಿಸಿದ್ದೀರಾ? ಮತ್ತು ನಿಮ್ಮ ಸರ್ಕಾರದಲ್ಲಿ ವಾರಕ್ಕೆ ಎಷ್ಟು ದಿವಸಗಳು?

ಅಧ್ಯಕ್ಷರು:– ಬಹಳ ಚೆನ್ನಾಗಿದೆ. ರವಿ, ಏಕೆ ಹೊರಡಿಸಿಲ್ಲ ಅಷ್ಟನ್ನು ಕೇಳಿ.

ಶ್ರೀ ಸಿ.ಟಿ. ರವಿ:– ಬೇಕಾಬಿಟ್ಟಿ ಉತ್ತರವನ್ನು ಕೊಟ್ಟುಬಿಡಬಹುದೇ?

ಅಧ್ಯಕ್ಷರು:– ವಿಳಂಬವಾಗಿರುವುದಕ್ಕೆ ಕಾರಣವೇನು ಎಂದು ಕೇಳಿ.

ಶ್ರೀ ಟಿ.ಬಿ. ಜಯಚಂದ್ರ:– 102.00 ಕೋಟಿ ರೂಪಾಯಿಗಳು ಮಾತ್ರ ಇರುವುದು. ಆ ಹಣಕಾಸಿನ ಇತಿಮಿತಿಯಲ್ಲಿ ಅದನ್ನು ಮಾಡೋಣ. ಹೆಚ್ಚು ಮಾಡುವ ಪ್ರಯತ್ನವನ್ನು ಮಾಡಿದ್ದೇವೆ. ಅದನ್ನು ಹೆಚ್ಚು ಮಾಡುವುದಕ್ಕೆ ನಮ್ಮ ಉದ್ದೇಶ ಇದ್ದದ್ದು ನಿಜ. ಉದ್ದೇಶದ ಹಿನ್ನೆಲೆಯಲ್ಲಿ ಮಂತ್ರಿಗಳು ಆ ರೀತಿ ಹೇಳಿದ್ದಾರೆ. ಇದೊಂದು ನೀತಿ ಪ್ರಶ್ನೆಯಾಗುತ್ತದೆ. ಅದನ್ನು ಸಚಿವ ಸಂಪುಟದಲ್ಲಿಟ್ಟು ಚರ್ಚೆ ಮಾಡಿ ತೀರ್ಮಾನ ಮಾಡಬೇಕಾಗುತ್ತದೆ.

ಶ್ರೀ ಸಿ.ಟಿ. ರವಿ:– ನಾನು ಈ ಉತ್ತರವನ್ನು ಅಧ್ಯಕ್ಷರಿಗೆ ಕಳುಹಿಸಿಕೊಡುತ್ತೇನೆ. ಒಂದು ವಾರದಲ್ಲಿ ಆದೇಶವನ್ನು ಹೊರಡಿಸುತ್ತೇವೆ ಎಂದು ಹೇಳಿದ ಮಾತಿಗೆ ಏನು commitment ಇಲ್ಲವೇ?

ಶ್ರೀ ಟಿ.ಬಿ ಜಯಚಂದ್ರ:– ನಾನು ಅದನ್ನೇ ಹೇಳಿದ್ದೇನೆ. ಅದು ಪರಿಶೀಲನೆಯಲ್ಲಿದೆ.

ಶ್ರೀ ಸಿ.ಟಿ. ರವಿ:– ಅದು ಪರಿಶೀಲನೆಯಲ್ಲಿದೆ ಎಂದು ಹೇಳಿಲ್ಲ. ಅವರು ಕೊಟ್ಟಿರುವ ಉತ್ತರದಲ್ಲಿ ಮುಂದಿನ ವಾರದಲ್ಲಿ ಆದೇಶವನ್ನು ಹೊರಡಿಸಲಾಗುವುದು.

ಶ್ರೀ ಟಿ.ಬಿ. ಜಯಚಂದ್ರ:– ನೀವು ಕಳುಹಿಸಿ ಕೊಡಿ, ಅದನ್ನು ಸಚಿವರ ಗಮನಕ್ಕೂ ತರುತ್ತೇನೆ.

ಶ್ರೀ ಸಿ.ಟಿ. ರವಿ:– ಕಳುಹಿಸಿಕೊಡುತ್ತೇನೆ ಅಧ್ಯಕ್ಷರೆ, ಈ 'ವಿದ್ಯಾಸಿರಿ' ಯೋಜನೆಯಲ್ಲಿ secular Government ನಲ್ಲಿ ತಾರತಮ್ಯ ಏಕೆ? ಎಲ್ಲಾ ವಿದ್ಯಾರ್ಥಿಗಳಿಗೂ ಏಕೆ ಕೊಡಬಾರದು? ಕೊಡುವ ಯೋಚನೆ ಏಕೆ ಮಾಡಬಾರದು? ಇದರಲ್ಲಿ ತಾರತಮ್ಯ ಏಕೆ?

ಶ್ರೀ ಹೆಚ್.ಎಸ್. ಮಹದೇವ್‌ಪ್ರಸಾದ್:– ಹಿಂದೆ ಆ ರೀತಿ ಉತ್ತರ ಬರುತ್ತಿತ್ತು, ಅದನ್ನು ನೋಡಿ ಆ ರೀತಿ ಉತ್ತರ ಕೊಟ್ಟುಬಿಟ್ಟಿದ್ದಾರೆ.

ಶ್ರೀ ಟಿ.ಬಿ. ಜಯಚಂದ್ರ:– ನಿಮ್ಮ ಸಲಹೆ ಹಾಗೂ ಮಂತ್ರಿಗಳು ಹೇಳುತ್ತಿರುವಂಥ ಸಲಹೆ ಸರಿಯಾಗಿದೆ. ಇದನ್ನು ಪರಿಶೀಲನೆ ಮಾಡೋಣ.

ಶ್ರೀ ಸಿ.ಟಿ. ರವಿ:– ಅಧ್ಯಕ್ಷರೆ, ಸಚಿವರು ಕೊಟ್ಟಿರುವ ಉತ್ತರವನ್ನು ಕಳುಹಿಸಿಕೊಡುತ್ತಿದ್ದೇನೆ.

ಅಧ್ಯಕ್ಷರು:– ಆಯಿತು. ಈಗ ಪ್ರಶ್ನೋತ್ತರ ಆಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು ಸಚಿವರು ಮಂಡಿಸಿ.

ಆ. ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

5ನೇ ಪಟ್ಟಿ

ಶ್ರೀ ಟಿ.ಬಿ. ಜಯಚಂದ್ರ: (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಪಶುಸಂಗೋಪನೆ ಮತ್ತು ಮುಜರಾಯಿ ಸಚಿವರು):